ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 01-04-2017

## ಪತ್ರಿಕಾ ಆಮಂತ್ರಣ

1. ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮ

ಉದ್ಘಾಟನೆ:

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 2-4-2017 ರಂದು ಬೆಳಿಗ್ಗೆ 8-15 ಗಂಟೆಗೆ

ಸ್ಥಳ: ಕೃಷ್ಣಾ, ಮುಖ್ಯಮಂತ್ರಿಗಳ ಗೃಹ ಕಛೇರಿ, ಬೆಂಗಳೂರು

2. ಪೊಲೀಸ್ ಧ್ವಜ ದಿನಾಚರಣೆ:

ಮುಖ್ಯ ಅತಿಥಿ:

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಅಧ್ಯಕ್ಷತೆ:

ಡಾ. ಜಿ. ಪರಮೇಶ್ವರ, ಗೃಹ ಸಚಿವರು.

ದಿನಾಂಕ: 02-04-2017 ಭಾನುವಾರ, ಸಮಯ : ಬೆಳಿಗ್ಗೆ 9-00 ಗಂಟೆಗೆ.

ಸ್ಥಳ: ಕೆ.ಎಸ್.ಆರ್.ಪಿ. ಪೆರೇಡ್ ಮೈದಾನ, ಕೋರಮಂಗಲ, ಬೆಂಗಳೂರು.

3. . ವಿಶ್ವ ಆಟಿಸಂ ಅರಿವು ದಿನಾಚರಣೆ – 2017:

ಉದ್ಘಾಟನೆ:

ಶ್ರೀಮತಿ ಉಮಾಶ್ರೀ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವೆ.

ಅಧ್ಯಕ್ಷತೆ:

ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

ಮುಖ್ಯ ಅತಿಥಿಗಳು:

ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪಿ.ಸಿ. ಮೋಹನ್, ಲೋಕಸಭಾ ಸದಸ್ಯರು, ಬೆಂಗಳೂರು ಕೇಂದ್ರ.

ಎನ್. ಎ. ಹ್ಯಾರಿಸ್, ವಿಧಾನಸಭಾ ಸದಸ್ಯರು, ಶಾಂತಿನಗರ ಕ್ಷೇತ್ರ ಹಾಗೂ ಅಧ್ಯಕ್ಷರು.

ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ.
ಶ್ರೀಮತಿ ಶಕುಂತಲಾ ಟಿ. ಶೆಟ್ಟಿ, ವಿಧಾನಸಭಾ ಸದಸ್ಯರು ಹಾಗೂ ಸಂಸದೀಯ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
ಡಾ. ಅಂಜಲಿ ನಿಂಬಾಳ್ಕರ್, ಅಧ್ಯಕ್ಷರು, ರಾಜ್ಯ ಬಾಲಭವನ ಸೊಸೈಟಿ.

ದಿನಾಂಕ: 02-04-2017, ಭಾನುವಾರ, ಸಮಯ: ಬೆಳಿಗ್ಗೆ 10-00 ಗಂಟೆಗೆ

ಸ್ಥಳ: ಜವಾಹರ ಬಾಲಭವನ, ಕಬ್ಬನ್‌ಪಾರ್ಕ್, ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ಮತದಾನ ದಿನ – ವೇತನ ಸಹಿತ ರಜೆಗೆ ಅವಕಾಶ

ಬೆಂಗಳೂರು, ಏಪ್ರಿಲ್ 1 (ಕರ್ನಾಟಕ ವಾರ್ತೆ)

ಏಪ್ರಿಲ್ 9 ರ ಭಾನುವಾರದಂದು ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ಹಾಗೂ ಮೈಸೂರು ಜಿಲ್ಲೆಯ ನಂಜನಗೂಡು (ಎಸ್‌ಸಿ) ವಿಧಾನಸಭಾ ಕ್ಷೇತ್ರಗಳಿಗೆ ನಡೆಯಲಿರುವ ಉಪ ಚುನಾವಣೆಯ ಹಿನ್ನಲೆಯಲ್ಲಿ ಈ ಎರಡೂ ಕ್ಷೇತ್ರದ ಎಲ್ಲಾ ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ, ಎಲ್ಲಾ ವ್ಯವಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರ ಸಾರ್ವಜನಿಕ ಸಂಸ್ಥೆ (Establishment) ಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ **Negotiable Instruments Act 1981.** ಕಲಂ 25 ರಡಿ ಮತ್ತು **Representation of People Act, 1951** ಕಲಂ 135 ಬಿ ಅಡಿಯಲ್ಲಿ ಅಂದು ವೇತನ ಸಹಿತ ರಜೆ ನೀಡುವಂತೆ ಸರ್ಕಾರ ಆದೇಶ ಹೊರಡಿಸಿದೆ.

ಎಂಎಸ್/ಕೆಎಂ

## ರಾಜ್ಯ ಪರಿಸರ ಪ್ರಶಸ್ತಿಗಾಗಿ ಅರ್ಜಿ/ನಾಮನಿರ್ದೇಶನಕ್ಕಾಗಿ ಆಹ್ವಾನ

ಬೆಂಗಳೂರು, ಏಪ್ರಿಲ್ 1 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯು 2016–17 ನೇ ಸಾಲಿನ ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿಗಳಿಗೆ ಅರ್ಜಿಗಳನ್ನು/ ನಾಮ ನಿರ್ದೇಶನಗಳನ್ನು ಆಹ್ವಾನಿಸಿದೆ.

ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ (ಸರ್ಕಾರಿ/ಸರ್ಕಾರೇತ ಸಂಸ್ಥೆಗಳು/ಕಂಪನಿಗಳು/ಟ್ರಸ್ಟ್‌ಗಳು) ತಲಾ ಒಂದು ಲಕ್ಷ ರೂ. ನಗದು ಹಾಗೂ ಪ್ರಶಸ್ತಿ ಪ್ರಮಾಣ ಪತ್ರವನ್ನು ನೀಡಲಾಗುವುದು.

ಅರ್ಜಿ/ನಾಮನಿರ್ದೇಶನ ಸಲ್ಲಿಸಲು ಏಪ್ರಿಲ್ 30 ಕೊನೆಯ ದಿನವಾಗಿದೆ. ಭರ್ತಿಮಾಡಿದ ಅರ್ಜಿಗಳನ್ನು ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಕೊಠಡಿ ಸಂಖ್ಯೆ 704, 7ನೇ ಮಹಡಿ, ಬಹುಮಹಡಿಗಳ ಕಟ್ಟಡ, 4 ನೇ ಹಂತ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಚೇರಿ, ಜಿಲ್ಲಾ ಪಂಚಾಯತ್ ಕಚೇರಿ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ಭವನ, ನಂ 49, ಚರ್ಚ್ ಸ್ಟ್ರೀಟ್, ಬೆಂಗಳೂರು – 560 001, ಮಹಾ ನಿರ್ದೇಶಕರು, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ’ ಹಸಿರು ಭವನ’, ದೊರೆಸಾನಿಪಾಳ್ಯ ಫಾರೆಸ್ಟ್ ಕ್ಯಾಂಪಸ್ ವಿನಾಯಕನಗರ ಸರ್ಕಲ್, ಜೆ.ಪಿ. ನಗರ, 5ನೇ ಫೇಸ್, ಬೆಂಗಳೂರು – 560 078, ಸದಸ್ಯ ಕಾರ್ಯದರ್ಶಿ, ಕರ್ನಾಟಕ ಜೀವ ವೈವಿಧ್ಯ ಮಂಡಳಿ, ನೆಲಮಹಡಿ, ವನವಿಕಾಸ 18ನೇ ಕ್ರಾಸ್ ಮಲ್ಲೇಶ್ವರಂ, ಬೆಂಗಳೂರು – 560 003, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಈ ಕಚೇರಿಗಳಲ್ಲಿ ಸಂಪರ್ಕಿಸಬಹುದು ಹಾಗೂ ಈ ಕೆಳಕಂಡ ವೆಬ್‌ಸೈಟ್‌ಗಳಲ್ಲಿ ಸಹ ನೋಡಬಹುದು. **www.parisara.kar.nic.in, www.kspcb.gov.in, www.empri.kar.nic.in, www.kbb.kar.nic.in,** ಮತ್ತು **www/karunadu/gov/in/Ida.**

ಎಂಎಸ್/ಕೆಎಂ

# Application Invited for Environment Award

Bangalore, April 1 (Karnataka Information)

**Applications/Nominations are invited for the Karnataka State Environment awards for the year 2016-17.**

The award will be conferred with a cash prize of Rupees one lakh and a citation on individuals and organizations (Public Sectors, NGO's Companies/Trusts) in recognition of their outstanding contribution made for environment protection and environment management. Last date for receipt of applications/nominations is 30-04-2017. Applications can be submitted to Department of Ecology and Environment, Room No. 704, 7th Floor, Multi Storied Building , 4th Stage, Bangalore. Details can be had from offices of all the Deputy Commissioners, Chief Executive Officers, Deputy Conservator of Forest, Karnataka State Pollution Control Board, No. 49, Parisara Bhavan, Church Street, M.G. Road, Bangalore -560 001. The Environmental Management and Policy Research Institute(EMPRI) "Hasiru Bhavana" Doresanipalya Forest Campus, Vinayakanagara Circle, J.P. Nagar 5th Phase, Bangalore 560 078, Karnataka Biodiversity Board, Ground Floor, Vanavikas, 18th Cross, Malleswaram, Bangalore -03. Office of the Chief Executive Officer, Karnataka Lake Conservation and Development Authority and the websites www.parisara.kiar.nic.in, www.kapcb.gov.in, www.empri.kar.nic.in and www.kbb.kar.nic.in, www.karunadu.gov.in/lda.

## ಮೂಲ ದಾಖಲೆ ಪರಿಶೀಲನೆ

ಬೆಂಗಳೂರು, ಏಪ್ರಿಲ್ 1 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 24-8-2016 ರ ಅಧಿಸೂಚನೆಯಲ್ಲಿ ಮೀನುಗಾರಿಕೆ ಇಲಾಖೆಯಲ್ಲಿನ ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಸಂರಕ್ಷಣಾಧಿಕಾರಿ, ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿನ ವೈಜ್ಞಾನಿಕ ಅಧಿಕಾರಿ (ಮನೋವಿಜ್ಞಾನ ವಿಭಾಗ/ವಿಷವಿಜ್ಞಾನ ವಿಭಾಗ/ರಸಾಯನಿಕ ವಿಭಾಗ/ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ/ಕರ್ನಾಟಕ ಗೃಹ ಮಂಡಳಿಯಲ್ಲಿನ ವಿವಿಧ ಹುದ್ದೆಗಳು, ಕೃಷಿ ಮಾರಾಟ ಇಲಾಖೆಯಲ್ಲಿನ ಸಹಾಯಕ ಅಭಿಯಂತರರು(ಸಿವಿಲ್) ಭಾಷಾಂತರ ನಿರ್ದೇಶನಾಲಯದಲ್ಲಿನ ಭಾಷಾಂತರಕಾರರು ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಪ್ರಾಂಶುಪಾಲರು (ಉರ್ದು ಭಾಷೆ) ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ದಿನಾಂಕ: 13-4-2017 ರಂದು ಬೆಳಿಗ್ಗೆ 9-30 ಗಂಟೆಗೆ ಮತ್ತು ಮಧ್ಯಾಹ್ನ 2-00 ಗಂಟೆಗೆ ಆಯೋಗದ ಕೇಂದ್ರ ಕಛೇರಿ ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in" ರಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಆಯೋಗದ ಅಂತರ್ಜಾಲದಿಂದ ದಿನಾಂಕ 03-04-2017 ರಿಂದ ಡೌನ್‌ಲೋಡ್ ಮಾಡಿಕೊಳ್ಳುವಂತೆಯೂ ಹಾಗೂ ಸೂಚನಾ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ ಹೆಲ್ಪ್‌ಲೈನ್ 7337830894 ನ್ನು ಸಂಪರ್ಕಿಸಲು ಆಯೋಗದ ಪ್ರಕಟಣೆ ತಿಳಿಸಿದೆ.

ಎಂಎಸ್/ಕೆಎಂ

## ಮೂಲ ದಾಖಲೆ ಪರಿಶೀಲನೆ

ಬೆಂಗಳೂರು, ಏಪ್ರಿಲ್ 1 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ಕೊಳೆಗೇರಿ ಅಭಿವೃದ್ಧಿ ಮಂಡಳಿಯಲ್ಲಿನ ಕಿರಿಯ ಅಭಿಯಂತರರು (ಸಿವಿಲ್) 8+1 ಪ್ರಾರೂಪಕರು (ಸಿವಿಲ್) 04 ಹುದ್ದೆಗಳಿಗೆ ಸಂಬಂಧಿಸಿದಂತೆ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ಆಯೋಗದ ಕೇಂದ್ರ ಕಚೇರಿಯಲ್ಲಿ 15-4-2017 ರಂದು ಬೆಳಿಗ್ಗೆ 9-30 ಗಂಟೆಗೆ ನಡೆಸಲಾಗುವುದು.

ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಈಗಾಗಲೇ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ. ಸೂಚನಾಪತ್ರವನ್ನು ಅಭ್ಯರ್ಥಿಗಳು ತಮ್ಮ ನೋಂದಣಿ ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಆಯೋಗದ ಅಂತರ್ಜಾಲ "http://kpsc.kar.nic.in" ಯಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದೆಂದು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಹೆಲ್ಪ್‌ಲೈನ್ 7337830894 ನ್ನು ಸಂಪರ್ಕಿಸಲು ಆಯೋಗದ ಪ್ರಕಟಣೆ ತಿಳಿಸಿದೆ.

ಎಂಎಸ್/ಕೆಎಂ

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಏಪ್ರಿಲ್ 1 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು,

ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ **ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಆದೇಶ ಮತ್ತು ಸಲಹೆಯಂತೆ** ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 02-04-2017**ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ.** ದತ್ತಶ್ರೀ **ಮತ್ತು ತಂಡ, ಬೆಂಗಳೂರು ರವರಿಂದ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಸಣ್ಣಪ್ಪ ನಾಯಕ ಮತ್ತು ತಂಡ, ಹಾಸನ ರವರಿಂದ ತತ್ವ ಪದ ಮತ್ತು ಭಜನೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಪ್ರಾಜೆಕ್ಟ್ ಮಿಶ್ರಮ್(Project Mishram) ಮತ್ತು ತಂಡದವರಿಂದ ಶಾಸ್ತ್ರೀಯ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ , ಮಾಚೋಹಳ್ಳಿ, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಎಂಎಸ್/ಕೆಎಂ